ಅಸಲು ದಾವಾ ಸಂಖ್ಯೆ - 187/2018
ಡಿಡಬ್ಲ್ಯೂ - 01
ದಿನಾಂಕಃ 03.08.2023
ಸಾಕ್ಷಿಗೆ ಪ್ರಮಾಣ ವಚನ ಭೋಧಿಸಲಾಯಿತು.

**ಮುಖ್ಯ ವಿಚಾರಣೆ - ಶ್ರೀ ಸಿ ಎಸ್ ಎಂ ವಕೀಲರಿಂದ.**

ಈ ದಾವೆಯಲ್ಲಿ ನಾನು 6 ನೇ ಪ್ರತಿವಾದಿ ಪರ ಒಟ್ಟು ಮೊಕ್ತಿಯಾರ ನಾಮದಾರನಾಗಿದ್ದು ಇಂದು ನಾನು ನನ್ನ ಮೌಖಿಕ ಸಾಕ್ಷ್ಯದ ಬದಲು ಈ ಮುಖ್ಯ ವಿಚಾರಣೆಯ ಪ್ರಮಾಣ ಪತ್ರವನ್ನು ಹಾಜರುಪಡಿಸಿದ್ದೇನೆ. ಇದರಲ್ಲಿ ಬರೆದ ಎಲ್ಲ ವಿಷಯ ನಿಜ ಮತ್ತು ಸರಿ ಇದ್ದು ನನಗೆ ಗೊತ್ತಿದೆ.

ನಾನು ಈ ಕೆಳಕಂಡ ದಸ್ತಾವೇಜುಗಳನ್ನು ಹಾಜರು ಪಡಿಸಿದ್ದೇನೆ.

6 ನೇ ಪ್ರತಿವಾದಿ ನನಗೆ ನೀಡಿರುವ ಒಟ್ಟು ಮೊಕ್ತಿಯಾರಪತ್ರ ಹಾಜರುಪಡಿಸಿದ್ದೇನೆ ಅದನ್ನು ನಿಡಿ-1 ಎಂದು ಗುರುತಿಸಲಾಯಿತು.

6 ನೇ ಪ್ರತಿವಾದಿಯ ಡಿಸ್ಚಾರ್ಜ ಸಮರಿ ಹಾಜರುಪಡಿಸಿದ್ದು ಅದನ್ನು ನಿಡಿ-2 ಎಂದು ಗುರುತಿಸಲಾಯಿತು.

ಶಿರಬಡಗಿ ಗ್ರಾಮ ಪಂಚಾಯತಿ ಅಲ್ಲಿಪುರ ಗ್ರಾಮದ ಮನೆ ಸಂಖ್ಯೆ 74 ರ ಭೂ ಆಕರಣೆಯಾದಿಯ ದೃಡಿಕೃತ ನಕಲನ್ನು  ಹಾಜರುಪಡಿಸಿದ್ದೇನೆ ಅದನ್ನು ನಿಡಿ-3 ಎಂದು ಗುರುತಿಸಲಾಯಿತು.

ಒಂದು ವಿದ್ಯುತ್ ಬಿಲ್  ಮತ್ತು ರಶೀದಿ ಹಾಜರುಪಡಿಸಿದ್ದು ಅವುಗಳನ್ನು ನಿಡಿ-4 ಮತ್ತು 5 ಎಂದು ಗುರುತಿಸಲಾಯಿತು.

ತೆರಿಗೆ ರಶೀದಿ  ಹಾಜರುಪಡಿಸಿದ್ದೇನೆ ಅದನ್ನು ನಿಡಿ-6 ಎಂದು ಗುರುತಿಸಲಾಯಿತು.

ಶಿರಬಡಗಿ ಗ್ರಾಮ ಪಂಚಾಯತಿ ಇವರು ನೀಡಿರುವ ಪರವಾನಿಗೆ ಪತ್ರವನ್ನು ಹಾಜರುಪಡಿಸಿದ್ದೇನೆ ಅದನ್ನು ನಿಡಿ-7 ಎಂದು ಗುರುತಿಸಲಾಯಿತು.

ದಿನಾಂಕಃ 29.08.2003 ರ ಅಲ್ಲಿಪುರ ಗ್ರಾಮದ ಖುಲ್ಲಾ ಜಾಗೆಯ ಖರೀದಿಪತ್ರದ ಮೂಲ ಪ್ರತಿ ಹಾಜರುಪಡಿಸಿದ್ದೇನೆ ಅದನ್ನು ನಿಡಿ-8 ಎಂದು ಗುರುತಿಸಲಾಯಿತು.

ಆದ್ದರಿಂದ ದಾವೆಯನ್ನು ವಜಾ ಮಾಡಬೇಕೆಂದು ಕೇಳಿಕೊಳ್ಳುತ್ತೇನೆ.

**ಪಾಟೀ ಸವಾಲುಃ ಪಾಟೀ ಸವಾಲಿಗೆ ಕಾಲಾವಕಾಶ ಕೋರಿರುತ್ತಾರೆ, ನೀಡಲಾಯಿತು.**

( ತೆರೆದ ನ್ಯಾಯಾಲಯದಲ್ಲಿ ನನ್ನ ಸಮಕ್ಷಮ ನನ್ನ ಉಕ್ತ ಲೇಖನದ ಮೇರೆಗೆ ಬೆರಳಚ್ಚು ಮಾಡಲಾಯಿತು.)

ಓ. ಹೆ. ಕೆ. ಸರಿ ಅದೆ.

ದಿವಾಣಿ ನ್ಯಾಯಾಧೀಶರು ಮತ್ತು
ಪ್ರ.ದ.ನ್ಯಾ.ದಂಡಾಧಿಕಾರಿಗಳು.ಸವಣೂರು